ಎ-72-(206)

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಎಸ್. ವೀಣಾ ಅಚ್ಚಯ್ಯ, ಇವರು ನಿಯಮ 72ರಡಿ ಮಂಡಿಸಿರುವ ಸೂಚನೆಗೆ ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರ

ವಿಷಯ:

ಕೊಡಗು ಜಿಲ್ಲೆಯಲ್ಲಿ, ಕರ್ನಾಟಕ ರಾಜ್ಯ ಸಾರಿಗೆ ಸಂಸ್ಥೆಯ ವಿಭಾಗೀಯ ಕಾರ್ಯಾಲಯ ಇಲ್ಲದೇ ಇರುವುದರಿಂದ, ಜಿಲ್ಲೆಯಲ್ಲಿ ಸಾರಿಗೆ ಸೇವೆ ಕಲ್ಪಿಸುವಲ್ಲಿ ನಿರಂತರವಾಗಿ ಭಾರಿ ವ್ಯತ್ಯಯಗಳಾಗುತ್ತಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಸಾರಿಗೆ ಸಚಿವರ ಗಮನ ಸೆಳೆಯಬಯಸುತ್ತೇನೆ.

ಉತ್ತರ:

ಕೊಡಗು ಜಿಲ್ಲೆಯ ಸಾರ್ವಜನಿಕ ಪ್ರಯಾಣಿಕರಿಗೆ ಸಾರಿಗೆ ಸೌಲಭ್ಯ ಕಲ್ಪಿಸುವ ಸಲುವಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಮಡಿಕೇರಿಯಲ್ಲಿ ಘಟಕ ಸ್ಥಾಪಿಸಿರುತ್ತದೆ. ಈ ಘಟಕದಿಂದ ಪ್ರತಿನಿತ್ಯ 106 ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಿ 38572 ಅನುಸೂಚಿ ಕಿ.ಮೀ.ಗಳನ್ನು ಕ್ರಮಿಸಲಾಗುತ್ತಿದೆ. ಅಲ್ಲದೇ, ಕೊಡಗು ಜಿಲ್ಲೆಯ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಕ.ರಾ.ರ.ಸಾ.ನಿಗಮದ ವತಿಯಿಂದ ಬೆಂಗಳೂರು, ರಾಮನಗರ, ಕೋಲಾರ, ಚಿಕ್ಕಬಳ್ಳಾಪುರ, ಮೈಸೂರು, ಮಂಡ್ಯ, ಚಾಮರಾಜನಗರ, ಹಾಸನ, ಚಿಕ್ಕಮಗಳೂರು, ಮಂಗಳೂರು, ಪುತ್ತೂರು ಹಾಗೂ ಶಿವಮೊಗ್ಗ ಮುಂತಾದ ಸ್ಥಳಗಳಿಂದ ಒಟ್ಟು 647 ದುಂಡು ಸುತ್ತುವಳಿಗಳನ್ನು ಕೊಡಗು ಜಿಲ್ಲೆಯ ಹಲವಾರು ಸ್ಥಳಗಳಿಗೆ ಕಾರ್ಯಾಚರಿಸಲಾಗುತ್ತಿದೆ. ಕೊಡಗು ಜಿಲ್ಲೆಯ ವ್ಯಾಪ್ತಿಯಲ್ಲಿ ಪ್ರಸ್ತುತ ಕಲ್ಪಿಸಿರುವ ಸಾರಿಗೆ ಸೌಲಭ್ಯ ಪ್ರಯಾಣಿಕರ ಬೇಡಿಕೆಗಳಿಗನುಗುಣವಾಗಿದ್ದು, ಸಾರಿಗೆಗಳನ್ನು ಸಮರ್ಪಕವಾಗಿ ಕಾರ್ಯಾಚರಣೆ ಮಾಡಲಾಗುತ್ತಿದೆ. ಅಲ್ಲದೇ, ಕೊಡಗು ಜಿಲ್ಲೆಯಲ್ಲಿ ಖಾಸಗಿ ಪ್ರವರ್ತಕರ ಸಾರಿಗೆಗಳು ಸಹ ಕಾರ್ಯಾಚರಣೆಯಲ್ಲಿರುತ್ತವೆ.

ಕೊಡಗು ಜಿಲ್ಲೆಯಲ್ಲಿ ಒಂದು ಘಟಕ ಮಾತ್ರ ಇರುವುದರಿಂದ ವಿಭಾಗೀಯ ಕಛೇರಿ ಸ್ಥಾಪಿಸುವುದು ಆರ್ಥಿಕ ದೃಷ್ಟಿಯಿಂದ ಸೂಕ್ತವಾಗಿರುವುದಿಲ್ಲ. ಮಡಿಕೇರಿಗೆ ಸಮೀಪವಿರುವ ಪುತ್ತೂರಿನಲ್ಲಿ ವಿಭಾಗೀಯ ಕಛೇರಿಯಿದ್ದು ಮಡಿಕೇರಿ ಘಟಕವು ಪ್ರಸ್ತುತ ಪುತ್ತೂರು ವಿಭಾಗದ ಆಡಳಿತ ವ್ಯಾಪ್ತಿಗೆ ಸೇರಿರುತ್ತದೆ ಹಾಗೂ ಕೊಡಗು ಜಿಲ್ಲೆಯ ಸಾರಿಗೆ ಅಗತ್ಯತೆಗಳನ್ನು ಈ ವಿಭಾಗದ ಮಡಿಕೇರಿ ಘಟಕದಿಂದ ಹಾಗೂ ನಿಗಮದ ಬೆಂಗಳೂರು, ರಾಮನಗರ, ಕೋಲಾರ, ಮೈಸೂರು, ಹಾಸನ, ಮಂಡ್ಯ, ಚಿಕ್ಕಮಗಳೂರು ಮುಂತಾದ ಘಟಕಗಳಿಂದ ಸಮರ್ಪಕವಾಗಿ ನಿರ್ವಹಿಸಲಾಗುತ್ತಿದೆ.

ಸಂಖ್ಯೆ: ಟಿಡಿ 178 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು